# ಕರ್ನಾಟಕ ವಿಧಾನ ಪರಿಷತ್ತು

1.ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 625
2.ಮಾನ್ಯ ಸದಸ್ಯರ ಹೆಸರು : ಶ್ರೀ ದಿನೇಶ್ ಗೂಳಿಗೌಡ
3.ಉತ್ತರಿಸಬೇಕಾದ ದಿನಾಂಕ : 21.02.2023
4.ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮೈಸೂರು ಸಕ್ಕರೆ ಕಾರ್ಖಾನೆಯನ್ನು ಪುನರಾರಂಭಿಸಲು 2022-23ನೇ ಆಯವ್ಯಯದಲ್ಲಿ ಘೋಷಣೆ ಮಾಡಿದ್ದ ಮೊತ್ತವೆಷ್ಟು; | 2019-20 ರಿಂದ ಸ್ಥಗಿತಗೊಂಡಿರುವ ಮೈಶುಗರ್ ಕಾರ್ಖಾನೆಯನ್ನು ಪುನಶ್ಚೇತನಗೊಳಿಸಲು ಸರ್ಕಾರವು ನಿರ್ಧರಿಸಿದ್ದು, ಈ ನಿಟ್ಟಿನಲ್ಲಿ ಮುಂದಿನ ಎರಡು ವರ್ಷಗಳ ಕಾಲ ಪ್ರಾಯೋಗಿಕವಾಗಿ ಸರ್ಕಾರದ ವತಿಯಿಂದ ಮೈಶುಗರ್ ಕಾರ್ಖಾನೆಯನ್ನು ನಡೆಸಲಾಗುವುದು. ಕಾರ್ಖಾನೆಯ ಯಂತ್ರೋಪಕರಣ ದುರಸ್ತಿಗಾಗಿ 50 ಕೋಟಿ ರೂ.ಗಳನ್ನು ಒದಗಿಸುವುದಲ್ಲದೆ ಹಣಕಾಸು ಸಂಸ್ಥೆಗಳಿಂದ ದುಡಿಯುವ ಬಂಡವಾಳವನ್ನು ಪಡೆಯಲು ವ್ಯವಸ್ಥೆ ಮಾಡಲಾಗುವುದು' ಎಂದು 2022-23 ನೇ ಸಾಲಿನ ಆಯವ್ಯಯ ಘೋಷಣಾ ಖಂಡಿಕೆ:271ರಲ್ಲಿ ಘೋಷಿಸಲಾಗಿದೆ. |
| (ಆ) | ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಸರ್ಕಾರ ಇದುವರೆವಿಗೂ ಬಿಡುಗಡೆ ಮಾಡಿರುವ ಮೊತ್ತವೆಷ್ಟು; | ಮೈಸೂರು ಸಕ್ಕರೆ ಕಾರ್ಖಾನೆಯ ಯಂತ್ರೋಪಕರಣಗಳ ದುರಸ್ತಿ ಮತ್ತು ಓವರ್ ಹಾಲಿಂಗ್ ಕೆಲಸಗಳಿಗೆ, ಸಾಮಾಗ್ರಿ ಖರೀದಿ ಮತ್ತು ಗುತ್ತಿಗೆ ಕೆಲಸಗಳನ್ನು ಕೈಗೊಳ್ಳಲು, ಕಬ್ಬು ಕಟಾವು ಮಾಡುವ ಮೇಸ್ತ್ರಿಗಳಿಗೆ ಮುಂಗಡ ಹಣ ಪಾವತಿಸಲು, ನೌಕರರಿಗೆ ಸ್ವಯಂ ನಿವೃತ್ತಿ ಸೌಲಭ್ಯ ಪಾವತಿಸುವುದಕ್ಕಾಗಿ ರೂ.32.58 ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. |
| (ಇ) | ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಹಣ ಬಿಡುಗಡೆ ಮಾಡದಿರುವುದರಿಂದ ಕಾರ್ಖಾನೆಯ ಅಭಿವೃದ್ಧಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ದುಡಿಯುವ ಬಂಡವಾಳಕ್ಕಾಗಿ ಹಾಗೂ ತುರ್ತು ಅವಶ್ಯಕ ಸೌಕರ್ಯಗಳನ್ನು ಕೈಗೊಳ್ಳಲು ರಾಜ್ಯ ಸರ್ಕಾರದಿಂದ ರೂ.15.00 ಕೋಟಿಗಳ ಸಾಲವನ್ನು ಮತ್ತು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದಿಂದ (ಕೆ.ಎಸ್.ಎಸ್.ಐ.ಡಿ.ಸಿ) ರೂ:15.00 ಕೋಟಿಗಳ ಸಾಲವನ್ನು ನೀಡಲಾಗಿರುತ್ತದೆ. |

| | | |
|---|---|---|
| (ಈ) | ಹಾಗಿದ್ದಲ್ಲಿ, ಆಯವ್ಯಯದಲ್ಲಿ ಘೋಷಿಸುರುವಂತೆ ಪೂರ್ಣ ಪ್ರಮಾಣದ ಹಣವನ್ನು ಸರ್ಕಾರ ಕೂಡಲೇ ಬಿಡುಗಡೆ ಮಾಡಲು ಕ್ರಮಕೈಗೊಳ್ಳುವುದೇ; ಹಾಗಿದ್ದಲ್ಲಿ, ಯಾವಾಗ ಬಿಡುಗಡೆ ಮಾಡಲಾಗುವುದು; | 2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ರೂ.50.00 ಕೋಟಿಗಳಲ್ಲಿ ಬಾಕಿ ಉಳಿದಿರುವ ರೂ.17.42 ಕೋಟಿಗಳನ್ನು ಬಿಡುಗಡೆಗೊಳಿಸುವ ವಿಷಯದಲ್ಲಿ ಕ್ರಮವಹಿಸಲಾಗುತ್ತಿದೆ. |
| (ಉ) | ಕಾರ್ಖಾನೆಯು ಪ್ರಾರಂಭದ ದಿನದಿಂದ ಇಲ್ಲಿಯವರೆಗೆ ಒಟ್ಟು ಎಷ್ಟು ಟನ್ ಕಬ್ಬನ್ನು ನುರಿಸಲಾಗಿದೆ; | ಮೈಸೂರು ಸಕ್ಕರೆ ಕಾರ್ಖಾನೆಯಲ್ಲಿ ದಿನಾಂಕ:20.09.2022 ರಿಂದ ದಿನಾಂಕ: 02.02.2023 ರವರೆಗೆ ಒಟ್ಟು 1,01,842,687 ಮೆ. ಟನ್ ಕಬ್ಬು ನುರಿಸಲಾಗಿರುತ್ತದೆ. |
| (ಊ) | ಪ್ರಸ್ತುತ ಪ್ರತಿ ದಿನ ಕಾರ್ಖಾನೆಯು ಎಷ್ಟು ಟನ್ ಕಬ್ಬನ್ನು ಅರೆಯಲಾಗುತ್ತಿದೆ: ಪ್ರಸಕ್ತ ಸಾಲಿನಲ್ಲಿ ಎಷ್ಟು ಟನ್ ಅರೆಯಲು ಗುರಿ ಹೊಂದಿದೆ; | ಮೈಸೂರು ಸಕ್ಕರೆ ಕಂಪನಿಯು ದಿನಾಂಕ: 20.09.2022 ರಿಂದ ಕಬ್ಬು ಅರೆಯುವುದನ್ನು ಪ್ರಾರಂಭಗೊಂಡು ಕಬ್ಬು ಪ್ರತಿ ದಿನ 800-1000 ಮೆ.ಟನ್ ಪೂರೈಕೆಯಾಗಿರುತ್ತದೆ. ಪ್ರಸಕ್ತ ಸಾಲಿನಲ್ಲಿ 1.50 ಲಕ್ಷ ಟನ್ ಕಬ್ಬು ಅರೆಯಲು ಗುರಿ ಹೊಂದಲಾಗಿತ್ತು.ಆದರೆ, ಕಾರ್ಖಾನೆಯ ಕಬ್ಬು ಅರೆಯುವ ಸಾಮರ್ಥ್ಯಕ್ಕೆ ಅನುಗುಣವಾಗಿ ಕಬ್ಬು ಪೂರೈಕೆಯಾಗದ ಹಿನ್ನೆಲೆಯಲ್ಲಿ ದಿ ಮೈಸೂರು ಸಕ್ಕರೆ ಕಂಪನಿಗೆ ಆಗುತ್ತಿರುವ ನಷ್ಟವನ್ನು ತಪ್ಪಿಸಲು ದಿನಾಂಕ: 02.02.2023 ರಂದು ಕಬ್ಬು ಅರೆಯುವಿಕೆ ಕಾರ್ಯವನ್ನು ನಿಲ್ಲಿಸಲಾಗಿದೆ. |
| (ಋ) | ಕಬ್ಬು ಸರಬರಾಜು ಮಾಡಿರುವ ಎಲ್ಲಾ ರೈತರಿಗೆ ಹಣ ಪಾವತಿ ಮಾಡಲಾಗಿದೆಯೇ: ಇಲ್ಲವಾದಲ್ಲಿ ಇನ್ನು ಎಷ್ಟು ರೈತರಿಗೆ ಹಾಗೂ ಎಷ್ಟು ಹಣವನ್ನು ಪಾವತಿಸಲು ಬಾಕಿಯಿದೆ? | 2022-23ನೇ ಸಾಲಿನಲ್ಲಿ 1,01,842.687 ಮೆ.ಟನ್ ಕಬ್ಬು ನುರಿಸಲಾಗಿರುತ್ತದೆ ಹಾಗೂ ರೈತರಿಗೆ ಒಟ್ಟು ಪಾವತಿಸಬೇಕಾದ ಮೊತ್ತ ರೂ.2,872.98 ಲಕ್ಷಗಳು ಆಗಿರುತ್ತದೆ. ಈ ಪೈಕಿ ಈಗಾಗಲೇ ರೈತರಿಗೆ ಒಟ್ಟು ಮೊತ್ತ 2630.80 ಲಕ್ಷಗಳನ್ನು ಪಾವತಿಸಲಾಗಿದೆ. ಮತ್ತು 300 ರೈತರಿಗೆ ರೂ. 242.90 ಲಕ್ಷಗಳನ್ನು ಪಾವತಿಸುವುದು ಬಾಕಿ ಇರುತ್ತದೆ. ಸದರಿ ಬಾಕಿ ಮೊತ್ತವನ್ನು ಪಾವತಿಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಸಿಐ 80 ಸಿಓಎಫ್ 2023

(ಶಂಕರ.ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು